ವಿಷಯ : ವ್ಯವಸಾಯೋತ್ಪನ್ನ ಮಾರುಕಟ್ಟೆಗಳ ಸಂಖ್ಯೆ.

Q: 1455

ಶ್ರೀ ವಾಟಾಳ್‌ನಾಗರಾಜ್ (ಚಾಮರಾಜನಗರ): ಮಾನ್ಯ ವ್ಯವಸಾಯೋತ್ಪನ್ನ ಮಾರುಕಟ್ಟೆ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ರಾಜ್ಯದಲ್ಲಿ ವ್ಯವಸಾಯೋತ್ಪನ್ನ ಮಾರುಕಟ್ಟೆಗಳು ಎಷ್ಟಿವೆ?

ಶ್ರೀ ಮದನಗೋಪಾಲನಾಯಕ್ (ವ್ಯವಸಾಯೋತ್ಪನ್ನ ಮಾರುಕಟ್ಟೆ ರಾಜ್ಯ ಸಚಿವರು ) :

ಅ) ರಾಜ್ಯದಲ್ಲಿ 120 ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳು ಇವೆ.

ವಿಷಯ : ರಸಗೊಬ್ಬರ ಬೆಲೆ ಕಡಿಮೆ ಮಾಡಲು ಸರ್ಕಾರದ ವಿಶೇಷವಾದ ಸಬ್ಸಿಡಿ.

Q: 1454

ಶ್ರೀ ವಾಟಾಳ್‌ನಾಗರಾಜ್ (ಚಾಮರಾಜನಗರ): ಮಾನ್ಯ ಕೃಷಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ರಸಗೊಬ್ಬರದ ಬೆಲೆ ಕಡಿಮೆ ಮಾಡಲು ಸರ್ಕಾರದವರು ವಿಶೇಷವಾದ ಸಬ್ಸಿಡಿಯನ್ನು ಕೊಡಲು ನಿರ್ಧರಿಸಲಾಗಿದೆಯೇ?
ಆ) ರಾಜ್ಯದಲ್ಲಿ ರಸಗೊಬ್ಬರದ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಶ್ರೀ ಎನ್. ಹುಚ್ಚಮಾಸ್ತಿಗೌಡ (ಕೃಷಿ ಸಚಿವರು) :

ಅ) ಹೌದು.
ಆ) ಕ್ಯಾಲ್ಸಿಯಂ ಅಮೋನಿಯಂ ನೈಟ್ರೇಟ್ (ಸಿ.ಎ.ಎನ್) ರಸಗೊಬ್ಬರ ಬಿಟ್ಟು ಬೇರೆ ರಸಗೊಬ್ಬರಗಳ ಕೊರತೆ ಇರುವುದಿಲ್ಲ.

ವಿಷಯ : ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಸೇವಾ ಸಹಕಾರ ಸಂಘಗಳ ಸಂಖ್ಯೆ.

Q: 782

ಶ್ರೀ ಬಿ. ಎಂ. ಇದಿನಬ್ಬ(ಉಳ್ಳಾಲ) : ಮಾನ್ಯ ಸಹಕಾರ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಒಟ್ಟು ಸೇವಾ ಸಹಕಾರ ಸಂಘಗಳು ಎಷ್ಟಿವೆ?
ಆ) ಅವುಗಳಲ್ಲಿ ಎಷ್ಟು ಲಾಭದಲ್ಲಿವೆ ಮತ್ತು ಎಷ್ಟು ನಷ್ಟದಲ್ಲಿವೆ? (ಅದು ಯಾವುದು ಎಂದು ವಿವರ ನೀಡುವುದು)
ಇ) ಒಂದು ವೇಳೆ ನಷ್ಟದಲ್ಲಿ ನಡೆಯುತ್ತಿದ್ದರೆ ಕಾರಣವೇನು?
ಈ) ನಷ್ಟದಲ್ಲಿ ನಡೆಯುತ್ತಿರುವ ಸಂಘಗಳನ್ನು ಪುನಶ್ಚೇತನಗೊಳಿಸಲಾಗುವುದೇ? ಅಥವಾ ಮುಚ್ಚಲಾಗುವುದೇ?